# AKKAMAHADEVI WOMEN'S UNIVERSITY, VIJAYAPURA

.................................................................................

**DATE: 24-02-2018**

**ಪ್ರಕಟಣೆಯ ಕೃಪೆಗಾಗಿ............**

ವಿಜಯಪುರ: ಮಹಿಳಾ ವಿವಿಗೆ ಸಂಬಂಧಿಸಿದ ಮಾಹಿತಿ ಹಕ್ಕು ಅರ್ಜಿಗಳ ವಿಲೇವಾರಿಯಲ್ಲಿ ಯಾವುದೇ ತಪ್ಪುಗಳಾಗದೇ ಇರುವುದು ವಿವಿಯ ಸಮರ್ಥ ಆಡಳಿತ ಮತ್ತು ಪಾರದರ್ಶಕತೆಯನ್ನು ಬಿಂಬಿಸುತ್ತದೆ ಎಂದು ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತ ಡಾ.ಸುಚೇತನ್ ಸ್ವರೂಪ ಶ್ಲಾಘಿಸಿದರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಆಡಳಿತ ಭವನದ ಸಿಂಡಿಕೇಟ್ ಸಭಾ ಭವನದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಮಾಹಿತಿ ಹಕ್ಕು ಕಾಯ್ದೆ ಕುರಿತ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿವಿಯ ಬೋಧಕ–ಬೋಧಕೇತರ ಸಿಬ್ಬಂದಿ ಜೊತೆಗೆ ಸಂವಾದ ನಡೆಸಿದ ಅವರು, ದೇಶದಲ್ಲಿ ಶೇ.50ರಷ್ಟು ಪ್ರತಿಭೆಯು ವಿಶ್ವವಿದ್ಯಾಲಯಗಳಿಂದಲೇ ಬರುವುದು. ಒಂದು ವಿವಿ ಹಾಳಾದರೆ ಇಡೀ ದೇಶವೇ ಹಾಳಾದಂತೆ. ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳು ತಮ್ಮ ಪಾವಿತ್ರ್ಯತೆಯನ್ನು ಉಳಿಸಿಕೊಂಡು ಹೋಗಬೇಕು ಎಂದು ತಿಳಿಸಿದರು.

ಪ್ರಸ್ತುತ ದಿನಮಾನಗಳಲ್ಲಿ ಮಾಹಿತಿಯು ಪ್ರತಿಯೊಬ್ಬ ಪ್ರಜೆಯ ಜ್ಞಾನ ಕ್ಷಿತಿಜ ವಿಸ್ತರಿಸಲು ಸಹಕಾರಿ. ಆದರೆ ಇಂದು ಮಾಹಿತಿ ಹಕ್ಕು ಕಾಯಿದೆಯು ಕೇವಲ ದಂಡ ಮತ್ತು ಪರಿಹಾರಕ್ಕೆ ಮಾತ್ರ ಸೀಮಿತವಾಗಿರುವುದು ವಿಷಾದಕರ ಸಂಗತಿ ಎಂದರು.

ಸಂವಾದ ಕಾರ್ಯಕ್ರಮದಲ್ಲಿ ಕುಲಸಚಿವ ಪ್ರೊ.ಎಲ್.ಆರ್.ನಾಯಕ ಸ್ವಾಗತಿಸಿದರು. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ.ಓಂಕಾರ ಕಾಕಡೆ ವಂದಿಸಿದರು. ಆರ್ಥಿಕ ಅಧಿಕಾರಿ ಪ್ರೊ.ಆರ್.ಸುನಂದಮ್ಮ, ಪ್ರೊ.ಎಸ್.ಎ.ಖಾಜಿ, ಪ್ರೊ.ವಿ.ವಿ.ಮಳಗಿ ಹಾಗೂ ವಿಶ್ವವಿದ್ಯಾನಿಲಯದ ಬೋಧಕ–ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

**ಫೋಟೊ ಕ್ಯಾಪ್ಷನ್:**

1) **ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಆಡಳಿತ ಭವನದ ಸಿಂಡಿಕೇಟ್ ಸಭಾ ಭವನದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಮಾಹಿತಿ ಹಕ್ಕು ಕಾಯ್ದೆ ಕುರಿತ ಸಂವಾದ ಕಾರ್ಯಕ್ರಮದಲ್ಲಿ ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತ ಡಾ.ಸುಚೇತನ್ ಸ್ವರೂಪ ಮಾತನಾಡಿದರು.**


kinley